**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/650/ಗ್ರಾಪಂಕಾ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:19-09-2014.

**ಸುತ್ತೋಲೆ**

**ವಿಷಯ :** ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಕೇಂದ್ರ ಸ್ಥಾನದಲ್ಲಿ ವಾಸ ಮಾಡುವ ಬಗ್ಗೆ ಹಾಗೂ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿ ಕಡ್ಡಾಯವಾಗಿ ಹಾಜರಿರುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 419 ಗ್ರಾಪಂಕಾ 2011 ದಿನಾಂಕ:06-01-2012.

---------

1. ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಕಛೇರಿ ಕೆಲಸ ಪ್ರಾರಂಭವಾಗುವ ಮುನ್ನ ಬೆಳಿಗ್ಗೆ 8.00 ಗಂಟೆಯಿಂದ ಸಾರ್ವಜನಿಕರಿಗೆ ಲಭ್ಯವಾಗುವುದು ಮತ್ತು ಸಾಯಂಕಾಲ ಕಛೇರಿ ವೇಳೆ ಮುಗಿದ ನಂತರವೂ ಇವರುಗಳು ಸಾರ್ವಜನಿಕರಿಗೆ ಲಭ್ಯವಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನದಲ್ಲಿಯೇ ವಾಸವಾಗಿರುವ ಬಗ್ಗೆ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವರದಿ ನೀಡತಕ್ಕದ್ದು ಎಂದು ಸೂಚಿಸಲಾಗಿತ್ತು. ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ ವಾಸವಿರದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಂಡು, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿತ್ತು.

2. ಕರ್ನಾಟಕ ವಿಧಾನ ಸಭೆಯ 2013-14ನೇ ಸಾಲಿನ ಅಂದಾಜುಗಳ ಸಮಿತಿಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಸಮಿತಿಯ 3ನೇ ವರದಿಯನ್ನು ದಿನಾಂಕ:22-07-2014ರಂದು ವಿಧಾನ ಸಭೆಯಲ್ಲಿ ಮಂಡಿಸಿರುತ್ತಾರೆ. ಸದರಿ ವರದಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯಿತಿಯಲ್ಲಿ ಲಭ್ಯವಿಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ ರಾಜ್ಯಾದ್ಯಂತ ದೂರುಗಳು ಕೇಳಿಬಂದಿರುತ್ತವೆ. ಇವರುಗಳು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಸಭೆಗಳಲ್ಲಿ ಭಾಗವಹಿಸುತ್ತಿದ್ದರೆ ಸಾರ್ವಜನಿಕರ ಕೆಲಸಗಳನ್ನು ಮಾಡುವವರು ಯಾರು ಎಂಬುದರ ಬಗ್ಗೆ ಸಮಿತಿ ಚರ್ಚಿಸಿ ಸಾರ್ವಜನಿಕ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಂಬಂಧಪಟ್ಟ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಇರುವುದು ಅತ್ಯಂತ ಅವಶ್ಯಕವೆಂದು ಸಮಿತಿಯು ಅಭಿಪ್ರಾಯ ವ್ಯಕ್ತಪಡಿಸಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಆಯಾ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿಯೇ ಕಡ್ಡಾಯವಾಗಿ ಹಾಜರಿದ್ದು ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಬೇಕೆಂದು ಸೂಕ್ತ ಆದೇಶವನ್ನು ಹೊರಡಿಸುವಂತೆ ಮತ್ತು ಸದರಿ ಅಧಿಕಾರಿಗಳು ಪಂಚಾಯಿತಿ

ಕಚೇರಿಗಳಲ್ಲಿ ಕಡ್ಡಾಯವಾಗಿ ಸಾರ್ವಜನಿಕರ ಭೇಟಿಗೆ ದೊರೆಯುವ ದಿನಗಳನ್ನು ಸಾರ್ವಜನಿಕರಿಗೆ ತಿಳಿಯಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ.

3. ಆದ್ದರಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಕಛೇರಿ ಕೆಲಸ ಪ್ರಾರಂಭವಾಗುವ ಮುನ್ನ ಬೆಳಿಗ್ಗೆ 8.00 ಗಂಟೆಯಿಂದ ಸಾರ್ವಜನಿಕರಿಗೆ ಲಭ್ಯವಾಗುವುದು ಮತ್ತು ಸಾಯಂಕಾಲ ಕಛೇರಿ ವೇಳೆ ಮುಗಿದ ನಂತರವೂ ಇವರುಗಳು ಸಾರ್ವಜನಿಕರಿಗೆ ಲಭ್ಯವಿದ್ದು, ಅವರುಗಳ ಕುಂದುಕೊರತೆ ಮತ್ತು ಕಾರ್ಯಗಳನ್ನು ಪರಿಹರಿಸಲು ಆದ್ಯತೆಯ ಮೇಲೆ ಕ್ರಮ ಕೈಗೊಳ್ಳುವುದು ಅತ್ಯಾವಶ್ಯಕವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನದಲ್ಲಿಯೇ ವಾಸವಾಗಿರುವ ಬಗ್ಗೆ ಮತ್ತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಆಯಾ ಗ್ರಾಮ ಪಂಚಾಯಿತಿ ಕಾರ್ಯಾಲಯದಲ್ಲಿಯೇ ಕಡ್ಡಾಯವಾಗಿ ಹಾಜರಿದ್ದು ಸಾರ್ವಜನಿಕರ ಕುಂದು ಕೊರತೆಗಳಿಗೆ ಸ್ಪಂದಿಸಿರುವ ಬಗ್ಗೆ ಹಾಗೂ ಸದರಿ ಅಧಿಕಾರಿಗಳು ಪಂಚಾಯಿತಿ ಕಚೇರಿಗಳಲ್ಲಿ ಕಡ್ಡಾಯವಾಗಿ ಸಾರ್ವಜನಿಕರ ಭೇಟಿಗೆ ದೊರೆಯುವ ದಿನಗಳನ್ನು ಸಾರ್ವಜನಿಕರಿಗೆ ತಿಳಿಯಪಡಿಸಿರುವ ಬಗ್ಗೆ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ವರದಿ ನೀಡತಕ್ಕದ್ದು.

4. ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿ ವಾಸವಿರದ ಬಗ್ಗೆ ಹಾಗೂ ಸದರಿ ನೌಕರರುಗಳು ಪಂಚಾಯಿತಿ ಕಚೇರಿಗಳಲ್ಲಿ ಕಡ್ಡಾಯವಾಗಿ ಸಾರ್ವಜನಿಕರ ಭೇಟಿಗೆ ದೊರೆಯುವ ದಿನಗಳನ್ನು ಸಾರ್ವಜನಿಕರಿಗೆ ತಿಳಿಯಪಡಿಸದಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ವಿರುದ್ಧ ಶಿಸ್ತು ಕ್ರಮ ಕೈಗೊಂಡು, ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಈ ಮೂಲಕ ಸೂಚಿಸಿದೆ.

(ಗಂಗಾರಾಮ್ ಬಡೇರಿಯಾ)
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ,

1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
2) ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು,(ಈ ಸುತ್ತೋಲೆಯ ಪ್ರತಿಯನ್ನು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮ ಪಂಚಾಯತಿಯ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಕಾರ್ಯದರ್ಶಿಗಳಿಗೆ ಕಳುಹಿಸಲು ಕ್ರಮ ವಹಿಸಲು ಸೂಚಿಸಿದೆ.)
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ, ಗ್ರಾ.ಅ.ಪ ಇಲಾಖೆ.
4) ಮಾಹಿತಿ ಕೇಂದ್ರ / ವೆಬ್ ಸೈಟ್ ಗ್ರಾ.ಅ.ಪ.ಇಲಾಖೆ.
5) ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.